ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1541
ಸದಸ್ಯರ ಹೆಸರು	:	ಶ್ರೀ ಅರುಣ ಶಹಾಪುರ.
ಉತ್ತರಿಸಬೇಕಾದ ದಿನಾಂಕ	:	24-09-2021
ಉತ್ತರಿಸುವ ಸಚಿವರು	:	ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕ್ರೈಸ್ನ ಪದವಿ ಪೂರ್ವ ಕಾಲೇಜುಗಳಲ್ಲಿ /ಉನ್ನತೀಕರಿಸಿದ ಶಾಲೆಗಳಲ್ಲಿ ಖಾಯಂ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಖಾಲಿ ಹುದ್ದೆಗಳು ಎಷ್ಟು;	ಹೌದು 26 ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಿಜ್ಞಾನ ಕಾಲೇಜುಗಳಲ್ಲಿ 33 ಹಾಗೂ 30 ಉನ್ನತೀಕರಿಸಿದ ವಸತಿ ಶಾಲೆಗಳಲ್ಲಿ 210 ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತವೆ.
ಆ)	ವಸತಿ ಶಾಲೆಗಳಲ್ಲಿನ ಸಹ ಶಿಕ್ಷಕರುಗಳಿಗೆ ವಸತಿ ಕಾಲೇಜುಗಳಲ್ಲಿ/ ಉನ್ನತೀಕರಿಸಿದ ಶಾಲೆಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಬಡ್ತಿ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು;	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸೂಕ್ತ ತಿದ್ದುಪಡಿ ಮಾಡಿಕೊಳ್ಳಲು ದಿನಾಂಕ: 24.08.2021 ರಂದು ಕರಡು ಸಮಗ್ರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರಕಟಿಸಲಾಗಿರುತ್ತದೆ. ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸಿ ನಿಯಮಾನುಸಾರ ಮುಂಬಡ್ತಿಗೆ ಕ್ರಮವಹಿಸಲಾಗುವುದು.
ಇ)	ವಸತಿ ಶಾಲೆಗಳ ಸಹ ಶಿಕ್ಷಕರುಗಳ ವಿಷಯವಾರು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದೆಯೇ; ಯಾವ ಕಾಲಮಿತಿಯಲ್ಲಿ ಉಪನ್ಯಾಸಕ ಹುದ್ದೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು?	ಪ್ರಸ್ತುತ ಸಾಲಿನ ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಕ್ರಮವಹಿಸಲಾಗಿದೆ. ತದನಂತರ ಬಡ್ತಿ ನೀಡಲು ಸಂಘದ ಕರಡು ಸಮಗ್ರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸಿ ನಿಯಮಾನುಸಾರ ಮುಂಬಡ್ತಿಗೆ ಕ್ರಮವಹಿಸಲಾಗುವುದು.

ಸಂಖ್ಯೆ: ಸಕಇ 416 ಮೊದೇಶಾ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು